## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2419 |
| ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22-03-2022 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯಾದ್ಯಂತ ಇರುವ ಎಲ್ಲಾ ವಸತಿ ಶಾಲೆಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿಯಂತ್ರಣದಲ್ಲಿ ಕಾರ್ಯನಿರ್ವಹಿಸುತ್ತವೆಯೇ; | ರಾಜ್ಯಾದ್ಯಂತ ಇರುವ ಎಲ್ಲಾ ವಸತಿ ನಿಲಯಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವುದಿಲ್ಲ. |
| ಆ | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಸ್ತುವಾರಿಯಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ವಸತಿ ಶಾಲೆಗಳಿವೆ; ಈ ಶಾಲೆಗಳಲ್ಲಿ ಒಟ್ಟು ಎಷ್ಟು ಮಕ್ಕಳು ವ್ಯಾಸಂಗ ಮಾಡುತ್ತಿದ್ದಾರೆ; | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಡಿಯಲ್ಲಿ ಒಟ್ಟು 37 (ಮೆಟ್ರಿಕ್ ಪೂರ್ವ-19, ಮೆಟ್ರಿಕ್ ನಂತರ-18) ವಸತಿ ನಿಲಯಗಳು ಸ್ವಯಂಸೇವಾ ಸಂಸ್ಥೆಗಳ ಮೂಲಕ ಕಾರ್ಯ ನಿರ್ವಹಿಸುತ್ತಿವೆ. ಇವುಗಳಲ್ಲಿ 2375 ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿದ್ದಾರೆ. |
| ಇ | ಈ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಆಹಾರ ಪದಾರ್ಥಗಳ ಪೂರೈಕೆಯನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಮಾಡಲಾಗುತ್ತಿದೆಯೇ; | ಬಾಲಕಿಯರ ವಸತಿ ನಿಲಯಗಳಲ್ಲಿ ರಾಜ್ಯ ಸರ್ಕಾರದಿಂದ ಯೋಜನೆಯ ಮಾರ್ಗಸೂಚಿ ಅನ್ವಯ ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಮಾಹೆಯಾನ ಪ್ರತಿ ವಿದ್ಯಾರ್ಥಿನಿಗೆ ಆಹಾರ ಭತ್ಯೆ ರೂ.1000 ಹಾಗೂ ಮೆಟ್ರಿಕ್ ನಂತರ ವಸತಿ ನಿಲಯಗಳಿಗೆ ಮಾಹೆಯಾನ ಪ್ರತಿ ವಿದ್ಯಾರ್ಥಿನಿಗೆ ಆಹಾರ ಭತ್ಯೆ ರೂ.1100 ನ್ನು ನಿಗದಿಪಡಿಸಿದ್ದು, ಇಲಾಖೆಯಿಂದ ನೀಡುವ ಆಹಾರಭತ್ಯೆ ಅನುದಾನಲ್ಲಿಯೇ ಆಹಾರ ಪದಾರ್ಥಗಳನ್ನು ಸ್ವಯಂಸೇವಾ ಸಂಸ್ಥೆಗಳು ಪಡೆಯುತ್ತಿವೆ. |
| ಈ | ಪ್ರಸಕ್ತ ಸಾಲಿನಲ್ಲಿ ಈ ವಸತಿ ಶಾಲೆಗಳಲ್ಲಿ ಮಕ್ಕಳ ಊಟಕ್ಕಾಗಿ ಕೇಂದ್ರ ಸರ್ಕಾರದಿಂದ ಪೂರೈಸಬೇಕಾಗಿದ್ದ ಅಕ್ಕಿಯ ಸರಬರಾಜು ವಿಳಂಬವಾಗಿದ್ದು, ಮಕ್ಕಳಿಗೆ ಗುಣಮಟ್ಟದ ಆಹಾರ ನೀಡಲು ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನ್ವಯಿಸುವುದಿಲ್ಲ. |

| | | |
|---|---|---|
| ಉ | ಬಂದಿದ್ದಲ್ಲಿ, ಕೇಂದ್ರ ಸರ್ಕಾರದಿಂದ ಅಕ್ಕಿ ಪೂರೈಕೆಯಲ್ಲಿ ವಿಳಂಬಕ್ಕೆ ಕಾರಣವೇನು; ಮಕ್ಕಳ ಊಟಕ್ಕೆ ಅಗತ್ಯವಿರುವಷ್ಟು ಅಕ್ಕಿ ಪ್ರಮಾಣವನ್ನು ವಸತಿ ಶಾಲೆಗಳಿಗೆ ಪೂರೈಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು? | ಅನ್ವಯಿಸುವುದಿಲ್ಲ |

**ಸಂ:ಮಮಇ 156 ಐಸಿಡಿ 2022**

Halappa B.A

**(ಆಚಾರ ಹಾಲಪ್ಪ ಬಸವಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ
ಸಚಿವರು.